**ಓ.ಎಸ್. ನಂ. 24 /2024** **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕಃ 02.07.2025 ರಂದು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಹಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. ದಿನಾಂಕಃ 24.07.1961 ರಂದು ಆದ ನೋಂದಾಯಿತ ಕ್ರಯಪತ್ರದ ಅಸಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ದಿನಾಂಕಃ 18.07.1961 ರಂದು ಆದ ನೋಂದಾಯಿತ ಕ್ರಯಪತ್ರದ ಅಸಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು, ಆರ್. ಎ. 157/2019 ರ ಆದೇಶ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು, ಸರ್ವಮಂಗಳ ಎಂಬುವವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 4 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸಾ ಸ ಇ ಒ.,

ಹಿರಿಯ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.,

ಹೆಚ್.ಡಿ.ಕೋಟೆ